**All India Radio: Bangalore**
**National Bulletin In Kannada**
**06.06.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**06.06.2025 / 7.35 am**

ಮುಖ್ಯಾಂಶಗಳು

೧. ಜಮ್ಮು-ಕಾಶ್ಮೀರದಲ್ಲಿಂದು ೪೬ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿರುವ ಪ್ರಧಾನಿ ನರೇಂದ್ರ ಮೊದಿ

೨. ಅಮರನಾಥ ಯಾತ್ರೆಗೆ ಸಂಪೂರ್ಣ ಭದ್ರತೆ ಒದಗಿಸಲು ಸೇನೆಯಿಂದ ಆಪರೇಷನ್ ಶಿವ

೩. ನವದೆಹಲಿಯಲ್ಲಿ ವಿವಿಧ ರಾಷ್ಟ್ರಗಳ ವಿದೇಶಾಂಗ ಸಚಿವರೊಂದಿಗೆ ಸಮಾಲೋಚನೆ ನಡೆಸಿದ ಸಚಿವ ಡಾ.ಎಸ್.ಜೈಶಂಕರ್

೪. ಬೆಂಗಳೂರು ಕಾಲ್ತುಳಿತ ಪ್ರಕರಣ: ನಗರ ಪೊಲೀಸ್ ಆಯುಕ್ತರು ಸೇರಿದಂತೆ ಹಿರಿಯ ಅಧಿಕಾರಿಗಳ ಅಮಾನತು; ಮೂರು ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ

#############

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಲಿದ್ದು, ಕತ್ರಾದಲ್ಲಿಂದು ೪೬ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಲಿದ್ದು, ಕೆಲವು ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಇದರ ಭಾಗವಾಗಿ ಪ್ರಧಾನಿ, ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕ ಯೋಜನೆಯನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ೨೭೨ ಕಿಲೋಮೀಟರ್ ಉದ್ದದ ಈ ಯೋಜನೆಯನ್ನು ಸುಮಾರು ೪೪ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ. ಈ ಯೋಜನೆಯು ಸಂಪೂರ್ಣ ವಿದ್ಯುದ್ದೀಕರಣಗೊಂಡ ವಿಭಾಗವಾಗಿದ್ದು, ೩೬ ಸುರಂಗಗಳು ಮತ್ತು ೯೪೩ ಸೇತುವೆಗಳನ್ನು ಒಳಗೊಂಡಿದೆ. ಈ ಯೋಜನೆಯ ಭಾಗವಾಗಿರುವ - ವಿಶ್ವದ ಅತಿ ಎತ್ತರದ ರೈಲ್ವೆ ಕಮಾನು ಸೇತುವೆಯಾದ ಚೇನಾಬ್ ಸೇತುವೆ ಮತ್ತು ಭಾರತದ ಮೊದಲ ಕೇಬಲ್-ಸ್ಟೇಡ್

ರೈಲು ಸೇತುವೆಯಾದ ಅಂಜಿ ಸೇತುವೆಯನ್ನು ಸಹ ಪ್ರಧಾನಿ ಉದ್ಘಾಟಿಸಲಿದ್ದಾರೆ. ಈ ಯೋಜನೆಯು ಕಾಶ್ಮೀರ ಕಣಿವೆ ಮತ್ತು ದೇಶದ ಉಳಿದ ಭಾಗಗಳ ನಡುವೆ ಸರ್ವಋತು, ತಡೆರಹಿತ ರೈಲು ಸಂಪರ್ಕವನ್ನು ಸ್ಥಾಪಿಸುತ್ತದೆ, ಇದು ಪ್ರಾದೇಶಿಕ ಚಲನಶೀಲತೆಯನ್ನು ಪರಿವರ್ತಿಸುವ ಮತ್ತು ಸಾಮಾಜಿಕ-ಆರ್ಥಿಕ ಏಕೀಕರಣವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಇದೇ ವೇಳೆ ಪ್ರಧಾನಿ ಕಟ್ರಾದಿಂದ ಶ್ರೀನಗರದವರೆಗೆ ಹಾಗೂ ಶ್ರೀನಗರದಿಂದ ಕಟ್ರಾಗೆ ಸಂಚರಿಸುವ ಎರಡು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಿಸಲಿದ್ದಾರೆ.

#############

ಕಳೆದ ಒಂದು ದಶಕದಲ್ಲಿ ಭಾರತ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಗರೀಬ್ ಕಲ್ಯಾಣ್ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಈ ಮಾಲಿಕೆಯಲ್ಲಿ ಇಂದು, ಭಾರತದ ನಾಗರಿಕತೆಯನ್ನು ಪುನರುಜ್ಜೀವನಗೊಳಿಸಲು ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆ ಕುರಿತ ಒಂದು ವರದಿ ಇಲ್ಲಿದೆ.

ವರದಿ:

ಕಳೆದ ದಶಕದ ಭಾರತದ ಸಾಂಸ್ಕೃತಿಕ ಪಯಣ ವರ್ಣರಂಜಿತವಾಗಿದ್ದು, ಕೇಂದ್ರ ಸರ್ಕಾರ ಭಾರತೀಯ ಪರಂಪರೆಗೆ ಹೊಸ ಶಕ್ತಿ ತುಂಬಿದೆ. ನಂಬಿಕೆ ಮತ್ತು ರಾಷ್ಟ್ರೀಯ ಏಕತೆಯ ಪ್ರತಿಕವಾಗಿರುವ ಅಯೋಧ್ಯೆಯ ರಾಮ ಮಂದಿರ, ಭಾರತೀಯರ ದಶಕಗಳ ಕನಸು ಸಾಕಾರವಾಗಿದೆ. ವಾರಾಣಸಿಯ ಕಾಶಿ ವಿಶ್ವನಾಥ್ ಧಾಮ್ ಕಾರಿಡಾರ್ ಯೋಜನೆಯು ಪ್ರಸಿದ್ಧ ಕಾಶಿ ವಿಶ್ವನಾಥ ದೇವಸ್ಥಾನವನ್ನು ಗಂಗಾ ನದಿಗೆ ನೇರವಾಗಿ ಸಂಪರ್ಕಿಸುವ ಮೂಲಕ ಯಾತ್ರಿಕರ ಅನುಭವವನ್ನು ಸಂಪೂರ್ಣವಾಗಿ ರೂಪಾಂತರಿಸಿದೆ. ಉಜ್ಜಯಿನಿಯಲ್ಲಿ ಆರಂಭಗೊಂಡ ಮಹಾಕಾಲ ಲೋಕ್ ಯೋಜನೆಯು ಮಹಾಕಾಲೇಶ್ವರ ದೇವಾಲಯದ ಯಾತ್ರಿಕರಿಗೆ ಜಾಗತಿಕ ಮಟ್ಟದ ಸೌಲಭ್ಯಗಳನ್ನು ನೀಡಿದೆ. ಕೆದಾರನಾಥ್ ಮತ್ತು ಬದ್ರಿನಾಥ್ ಧಾಮಗಳ ಪುನರ್ ಅಭಿವೃದ್ಧಿಯಿಂದ ಈ ಪವಿತ್ರ ಕ್ಷೇತ್ರಗಳಿಗೆ ಯಾತ್ರೆ ಮಾಡುವವರಿಗೆ ಸುರಕ್ಷತೆ ಹೆಚ್ಚಾಗಿದೆ. ಸ್ವದೇಶ ದರ್ಶನ ಯೋಜನೆ ೭೬

ವಿಷಯಾಧಾರಿತ ಸರ್ಕಿಟ್‌ಗಳಲ್ಲಿ ೫ ಸಾವಿರ  ಕೋಟಿ ರೂಪಾಯಿಗೂ ಹೆಚ್ಚು ಅನುದಾನದಡಿ ಯೋಜನೆಗಳನ್ನು ಅನುಮೋದಿಸಿದ್ದು, ಪ್ರವಾಸೋದ್ಯಮ ಮೂಲಸೌಕರ್ಯವನ್ನು ಉತ್ತೇಜಿಸಿದೆ. ಇದಕ್ಕೆ ಪೂರಕವಾಗಿ, ಹೃದಯ್ ಯೋಜನೆಯು ೧೨ ಪಾರಂಪಾರಿಕ ನಗರಗಳ ಅಭಿವೃದ್ಧಿಗೆ ಕೇಂದ್ರೀಕೃತವಾಗಿದೆ. ಈ ಎಲ್ಲ ಪ್ರಯತ್ನಗಳು ಒಟ್ಟಾಗಿ ಭಾರತದಲ್ಲಿನ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುತ್ತಿದ್ದು, ದೇಶಾದ್ಯಂತ ಪ್ರವಾಸೋದ್ಯಮವನ್ನು ಉತ್ತೇಜಿಸುತ್ತಿವೆ. ಈ ಪ್ರಯತ್ನಗಳು ಸಿಖ್ ಗುರುದ್ವಾರಗಳು, ಬೌದ್ಧ ವಿಹಾರಗಳು, ಜೈನ ದೇವಾಲಯಗಳು, ಸೂಫಿ ದರ್ಗಾಗಳು ಮತ್ತು ಜನಜಾತಿ ಪವಿತ್ರ ಸ್ಥಳಗಳ ಪುನಃಸ್ಥಾಪನೆಯನ್ನೂ ಒಳಗೊಂಡಿವೆ. ಭಾರತವು ವಿದೇಶಗಳಿಂದ ೩೫೦ ಕ್ಕೂ ಹೆಚ್ಚು ವಿಗ್ರಹಗಳು ಮತ್ತು ಪುರಾತನ ವಸ್ತುಗಳನ್ನು ಯಶಸ್ವಿಯಾಗಿ ಮರುಪಡೆಯುವಲ್ಲಿ ಯಶಸ್ವಿಯಾಗಿದೆ. ಪಿಎಂ ಗತಿ ಶಕ್ತಿ ಮತ್ತು ಭಾರತಮಾಲಾ ಯೋಜನೆಗಳ ಅಡಿಯಲ್ಲಿ ತೀರ್ಥಯಾತ್ರಾ ಸಂಪರ್ಕವನ್ನು ಹೆಚ್ಚಿಸಲಾಗಿದೆ, ಉತ್ತಮ ರಸ್ತೆ, ರೋಪ್‌ವೇ ಮತ್ತು ರೈಲು ಸಂಪರ್ಕಗಳ ಮೂಲಕ ಪವಿತ್ರ ಸ್ಥಳಗಳಿಗೆ ಪ್ರವೇಶ ಸುಲಭಗೊಳಿಸಲಾಗಿದೆ. ಈ ಸಾಂಸ್ಕೃತಿಕ ಪುನರುಜ್ಜೀವನ ಇತಿಹಾಸದ ಸಂರಕ್ಷಣೆಯ ಜೊತೆಗೆ ನಂಬಿಕೆಯನ್ನು ಬಲಪಡಿಸುವ ಹಾಗೂ ಭವಿಷ್ಯದ ತಲೆಮಾರುಗಳಿಗೆ ಏಕತೆಯ ಸ್ಫೂರ್ತಿಯಾಗಲಿದೆ.

##############

ಜಮ್ಮು ಮತ್ತು ಕಾಶ್ಮೀರದಲ್ಲಿ, ಜುಲೈ ೩ ರಂದು ಪ್ರಾರಂಭವಾಗಲಿರುವ ೩೮ ದಿನಗಳ ಅಮರನಾಥ ಯಾತ್ರೆಗೆ ಸಂಪೂರ್ಣ ಭದ್ರತೆಯನ್ನು ಒದಗಿಸಲು ಸೇನೆಯು ಆಪರೇಷನ್ ಶಿವ ಎಂಬ ಸಮಗ್ರ ಭದ್ರತಾ ಉಪಕ್ರಮವನ್ನು ಪ್ರಾರಂಭಿಸಿದೆ. ಅತ್ಯಂತ ಪವಿತ್ರ  ಆಧ್ಯಾತ್ಮಿಕ ಪ್ರಯಾಣಗಳಲ್ಲಿ ಒಂದಾದ ಈ ವಾರ್ಷಿಕ ತೀರ್ಥಯಾತ್ರೆಯು ೩ಸಾವಿರದ ೮೮೮ ಮೀಟರ್ ಎತ್ತರದಲ್ಲಿರುವ ಜಮ್ಮು ಮತ್ತು ಕಾಶ್ಮೀರದ ಪವಿತ್ರ ಅಮರನಾಥ ಗುಹಾ ದೇವಾಲಯಕ್ಕೆ ಸಾವಿರಾರು ಭಕ್ತರನ್ನು ತನ್ನತ್ತ ಆಕರ್ಷಿಸುತ್ತದೆ. ಏಪ್ರಿಲ್ ೨೨ ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿ ಸೇರಿದಂತೆ ಇತ್ತೀಚಿನ ಭದ್ರತಾ ಸವಾಲುಗಳ ಹಿನ್ನೆಲೆಯಲ್ಲಿ, ಸೇನೆಯು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳು, ಜಮ್ಮು ಮತ್ತು ಕಾಶ್ಮೀರ ಪೊಲೀಸರು ಮತ್ತು ಅಮರನಾಥ ದೇವಾಲಯ ಮಂಡಳಿಯೊಂದಿಗೆ ಸಮನ್ವಯದೊಂದಿಗೆ ಯಾತ್ರಿಕರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ಕಠಿಣ ಕ್ರಮಗಳನ್ನು

ತೆಗೆದು ಕೊಂಡಿದೆ.."ಆಪರೇಷನ್ ಶಿವ"ದಲ್ಲಿ ಸಿಆರ್‌ಪಿಎಫ್, ಬಿಎಸ್‌ಎಫ್, ಎಸ್‌ಎಸ್‌ಬಿ, ಐಟಿಬಿಪಿ ಮತ್ತು ಸಿಐಎಸ್‌ಎಫ್‌ನ ಘಟಕಗಳು ಸೇರಿದಂತೆ ೪೨ ಸಾವಿರಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿ ಭಾಗಿಯಾಗಿದ್ದಾರೆ. ಇವರು ಎರಡು ಪ್ರಾಥಮಿಕ ಯಾತ್ರಾ ಮಾರ್ಗಗಳಾದ ಪಹಲ್ಗಾಮ್ ಮತ್ತು ಬಾಲ್ಟಾಲ್‌ನಾದ್ಯಂತ ಕಾರ್ಯತಂತ್ರದ ಸ್ಥಳಗಳಲ್ಲಿ ನಿಯೋಜಿಸಲ್ಪಟ್ಟಿದ್ದಾರೆ. ಈ ಕಾರ್ಯಾಚರಣೆಯು ಎತ್ತರದ ಮಾರ್ಗ ತೆರವು, ಡ್ರೋನ್ ಕಣ್ಗಾವಲು, ಸಿಸಿಟಿವಿ ಮೇಲ್ವಿಚಾರಣೆ ಮತ್ತು ಮೂರು ಹಂತದ ಭದ್ರತಾ ವ್ಯವಸ್ಥೆಯ ಭಾಗವಾಗಿ ಗುಂಡು ನಿರೋಧಕ ವಾಹನಗಳ ನಿಯೋಜನೆ ಸೇರಿದಂತೆ ಸುಧಾರಿತ ಭದ್ರತಾ ಪ್ರೋಟೋಕಾಲ್‌ಗಳನ್ನು ಒಳಗೊಂಡಿದೆ.ಯಾವುದೇ ಸಂಭಾವ್ಯ ಬೆದರಿಕೆಗಳನ್ನು ತಡೆಯಲು ಯಾತ್ರಾ ಮಾರ್ಗಗಳಲ್ಲಿ ವಿಧ್ವಂಸಕ ವಿರೋಧಿ ಕಾರ್ಯಾಚರಣೆಗಳು ಮತ್ತು ಕಠಿಣ ತಪಾಸಣೆಗಳನ್ನು ನಡೆಸಲಾಗುತ್ತಿದೆ. ಸೇನೆಯ ಪ್ರಯತ್ನಗಳು ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವೇಶದ ಕೇಂದ್ರಬಿಂದುವಾದ ಲಖನ್‌ಪುರದಿಂದ ಪ್ರಾರಂಭವಾಗುವ ಆಧುನಿಕ ವೈದ್ಯಕೀಯ ಸೌಲಭ್ಯಗಳು, ಸುಧಾರಿತ ಸಾರಿಗೆ ಸೇವೆಗಳು ಮತ್ತು ನವೀಕರಿಸಿದ ವಸತಿ ವ್ಯವಸ್ಥೆಗಳಿಂದ ಕೂಡಿದೆ. ಮೇ ೨೯ ರಂದು ಜಮ್ಮುವಿನಲ್ಲಿ ನಡೆದ ಉನ್ನತ ಮಟ್ಟದ ಪರಿಶೀಲನಾ ಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಡೆರಹಿತ ಮತ್ತು ಸುರಕ್ಷಿತ ತೀರ್ಥಯಾತ್ರೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರದ ಬದ್ಧತೆಯನ್ನು ಒತ್ತಿ ಹೇಳಿದ್ದಾರೆ. ಸುರಕ್ಷತೆ ಮತ್ತು ಟ್ರ್ಯಾಕಿಂಗ್ ಅನ್ನು ಹೆಚ್ಚಿಸಲು ಅಮರನಾಥ ದೇವಾಲಯ ಮಂಡಳಿಯು ಯಾತ್ರಿಕರಿಗೆ ಕಡ್ಡಾಯ ರೇಡಿಯೋ ಆವರ್ತನ ಗುರುತಿನ ಕಾರ್ಡ್‌ಗಳನ್ನು ಸಹ ಪರಿಚಯಿಸಿದೆ.

#############

ವಿದೇಶಾಂಗ ಸಚಿವ ಡಾ. ಎಸ್. ಜಯಶಂಕರ್ ನಿನ್ನೆ ನವದೆಹಲಿಯಲ್ಲಿ ಕಝಾಕಿಸ್ತಾನ್, ತಜಿಕಿಸ್ತಾನ್, ಕಿರ್ಗಿಸ್ತಾನ್ ಮತ್ತು ತುರ್ಕ್ ಮೆನಿಸ್ತಾನ್ ರಾಷ್ಟ್ರಗಳ ವಿದೇಶಾಂಗ ಸಚಿವರನ್ನು ಭೇಟಿ ಮಾಡಿದರು.ಕಝಾಕಿಸ್ತಾನದ ಉಪಪ್ರಧಾನಿ ಹಾಗೂ ವಿದೇಶಾಂಗ ಸಚಿವ ಮುರಾತ್ ನುರ್ತಿಲು ಅವರೊಂದಿಗೆ ಭಾರತ-ಕಝಾಕಿಸ್ತಾನ್ ಸಂಬಂಧ ಬಲಪಡಿಸಲು ಸಹಕಾರ ಕಾರ್ಯಕ್ರಮದ ಒಪ್ಪಂದಕ್ಕೆ ಸಹಿ ಹಾಕಿದರು. ರಾಜಕೀಯ, ವ್ಯಾಪಾರ, ಹೂಡಿಕೆ ಹಾಗೂ ಇಂಧನ ಕ್ಷೇತ್ರದಲ್ಲಿ ಸಹಕಾರ ಕುರಿತು ಚರ್ಚಿಸಿದರು. ಸಚಿವ ಡಾ. ಜೈಶಂಕರ್ ಅವರನ್ನು ಭೇಟಿ ಮಾಡಿದ ತಜಿಕಿಸ್ತಾನದ

ವಿದೇಶಾಂಗ ಸಚಿವ ಸಿರೋಜಿದ್ದಿನ್ ಮುಹ್ರಿದ್ದಿನ್ ವಾಣಿಜ್ಯ, ಹೂಡಿಕೆ ಮತ್ತು ಸಂಪರ್ಕ ಬಲಪಡಿಸುವ ಬಗ್ಗೆ ಚರ್ಚಿಸಿ, ಭಯೋತ್ಪಾದನೆ ವಿರುದ್ಧ ಕಠಿಣ ನಿಲುವು ಅಗತ್ಯವಿದೆ ಎಂಬುದರ ಕುರಿತು ಒಮ್ಮತ ವ್ಯಕ್ತಪಡಿಸಿದರು. ಕಿರ್ಗಿಸ್ತಾನ್ ವಿದೇಶಾಂಗ ಸಚಿವ ಝೀನ್‌ಬೇಕ್ ಕುಲುಬಾಯೇವ್ ಅವರೊಂದಿಗೆ ಬ್ಯಾಂಕಿಂಗ್, ಶಿಕ್ಷಣ, ಇಂಧನ, ಆರೋಗ್ಯ ಮತ್ತು ಸಾಮರ್ಥ್ಯ ನಿರ್ಮಾಣ ಕುರಿತ ಸಹಕಾರದ ಬಗ್ಗೆ ಚರ್ಚಿಸಿ, ಸಹಕಾರ ಯೋಜನೆಗೆ ಸಹಿ ಹಾಕಲಾಯಿತು. ತುರ್ಕ್‌ಮೆನಿಸ್ತಾನ್ ವಿದೇಶಾಂಗ ಸಚಿವ ರಶೀದ್ ಮೆರೆದೋವ್ ಅವರೊಂದಿಗೆ ವ್ಯಾಪಾರ, ಹೂಡಿಕೆ, ಸಂಪರ್ಕ, ಆರೋಗ್ಯ ಮತ್ತು ಶಕ್ತಿಯಲ್ಲಿ ಸಹಕಾರ ಬಲಪಡಿಸುವ ಬಗ್ಗೆ ಮಾತುಕತೆ ನಡೆಸಿದರು.

#############

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ ೧೧ ಜನರು ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ ಮತ್ತು ಇತರ ಹಲವಾರು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದಾರೆ. ಇದರ ಬೆನ್ನಲ್ಲೇ ಅಪರ ಪೊಲೀಸ್ ಮಹಾನಿರ್ದೇಶಕರಾಗಿರುವ ಸೀಮಂತ್ ಕುಮಾರ್ ಸಿಂಗ್ ಅವರನ್ನು ತಕ್ಷಣ ದಿಂದ ಜಾರಿಗೆ ಬರುವಂತೆ ಹೆಚ್ಚುವರಿಯಾಗಿ ಬೆಂಗಳೂರು ಪೊಲೀಸ್ ಆಯುಕ್ತರನ್ನಾಗಿ ನೇಮಕ ಮಾಡಲಾಗಿದೆ. ಆರ್‌ಸಿಬಿ ತಂಡದ ಪ್ರತಿನಿಧಿಗಳು, ಕಾರ್ಯಕ್ರಮ ನಿರ್ವಹಣಾ ಸಂಸ್ಥೆ ಡಿಎನ್‌ಎ ಎಂಟರ್‌ಟೈನ್‌ಮೆಂಟ್ ಮತ್ತು ಕರ್ನಾಟಕ ರಾಜ್ಯ ಕ್ರಿಕೆಟ್ ಅಸೋಸಿಯೇಷನ್-ಕೆಎಸ್‌ಸಿಎ ಪ್ರತಿನಿಧಿಗಳನ್ನು ತಕ್ಷಣ ಬಂಧಿಸುವಂತೆ ರಾಜ್ಯದ ಡಿಜಿಪಿ ಮತ್ತು ಐಜಿಪಿಗೆ ಸೂಚಿಸಿರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ವಿವಿಧ ಆರೋಪಗಳ ಅಡಿಯಲ್ಲಿ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಕರ್ನಾಟಕದ ನಿವೃತ್ತ ಹೈಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಮೈಕೆಲ್ ಡಿ'ಕುನ್ಹಾ ನೇತೃತ್ವದಲ್ಲಿ ಏಕ ಸದಸ್ಯ ನ್ಯಾಯಾಂಗ ತನಿಖೆಯನ್ನು ಘೋಷಿಸಲಾಗಿದೆ. ಆಯೋಗ ೩೦ ದಿನಗಳಲ್ಲಿ ತನ್ನ ವರದಿಯನ್ನು ಸಲ್ಲಿಸಲಿದೆ. ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಎ.ಕೆ. ಗಿರೀಶ್ ಮತ್ತು ಸಹಾಯಕ ಪೊಲೀಸ್ ಆಯುಕ್ತ ಸಿ. ಬಾಲಕೃಷ್ಣ, ಕೇಂದ್ರ ವಿಭಾಗದ ಉಪ ಪೊಲೀಸ್ ಆಯುಕ್ತ ಶೇಖರ್ ಎಚ್. ತೆಕ್ಕಣ್ಣವರ್

ಮತ್ತು ಕ್ರೀಡಾಂಗಣದ ಉಸ್ತುವಾರಿ ವಹಿಸಿದ್ದ ಹೆಚ್ಚುವರಿ ಪೊಲೀಸ್ ಆಯುಕ್ತ ವಿಕಾಶ್ ಕುಮಾರ್ ವಿಕಾಶ್ ಅವರನ್ನು ಅಮಾನತುಗೊಳಿಸಲು ಸಂಪುಟ ನಿರ್ಧರಿಸಿದೆ. ಈ ನಡುವೆ ಬಿಜೆಪಿ ಸಂಸದ ಮತ್ತು ಪಕ್ಷದ ರಾಷ್ಟ್ರೀಯ ವಕ್ತಾರ ಸಂಬಿತ್ ಪಾತ್ರ, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿಗಳ ರಾಜೀನಾಮೆಗೆ ಒತ್ತಾಯಿಸಿದ್ದಾರೆ.

#############

#### ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ####